ಕರ್ನಾಟಕ ಸರ್ಕಾರದ ನಡವಳಿಗಳು

ಜಲ ಸಂಪನ್ಮೂಲ ಇಲಾಖೆ

ವಿಷಯ:- ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಕುಂಸಿ, ಮಲೇಶಂಕರ, ಸಿರಿಗೆರೆ, ತಮ್ಮಡಿಹಳ್ಳಿ ಸುತ್ತಮುತ್ತಲಿನ ಗ್ರಾಮಗಳ ಕೆರೆಗಳಿಗೆ ಮತ್ತು ಶಿಕಾರಿಪುರ ಮತ್ತು ಶಿರಾಳಕೊಪ್ಪ ತಾಲ್ಲೂಕಿನ ಪಟ್ಟಣಗಳ ಹಾಗೂ ಗ್ರಾಮಾಂತರ ಪ್ರದೇಶದ ಕುಡಿಯುವ ನೀರಿನ ಉದ್ದೇಶಕ್ಕಾಗಿ ತುಂಗಾ ನದಿಯಿಂದ ನೀರನ್ನೆತ್ತಿ ಕೆರೆಗಳಿಗೆ ತುಂಬಿಸುವ (ಹೊಸಳ್ಳಿ ಕೆರೆ ತುಂಬಿಸುವ ಯೋಜನೆ) ರೂ.305.00 ಕೋಟಿಗಳ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಕುಂಸಿ-ಹಾರ್ನಳ್ಳಿ/2018-19/ 6959 ದಿನಾಂಕ:20.02.2019.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ತಾಂತ್ರಿಕ/ಕುಂಸಿ-ಹಾರ್ನಳ್ಳಿ/ 2018-19/ 7174 ದಿನಾಂಕ:27.02.2019 ಮತ್ತು ಪತ್ರ ಸಂಖ್ಯೆ:2194 ದಿನಾಂಕ:26.07.2019.

-----***-----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕಿನ 75 ಕೆರೆಗಳಿಗೆ ಶಿಕಾರಿಪುರ ತಾಲ್ಲೂಕಿನ ಅಂಜನಾಪುರ ಅಣೆಕಟ್ಟೆಗೆ ಒಳ ಹರಿವಿನ ಅಭಾವದಿಂದ ನೀರಿನ ಸಂಗ್ರಹಣೆಯಾಗದೇ ಇರುವುದರಿಂದ ಸ್ಥಳೀಯ ರೈತರು ಹಾಗೂ ಜನ ಪ್ರತಿನಿಧಿಗಳು, ಜನ-ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿ ಪಡಿಸುವಂತೆ ಒತ್ತಾಯಿಸಿರುವುದರಿಂದ, ಸದರಿ ಯೋಜನೆಯನ್ನು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ. ಸದರಿ ಕೆರೆಗಳನ್ನು ಅವುಗಳ ಸಾಮರ್ಥ್ಯದ ಶೇ.50ರಷ್ಟು ತುಂಬಿಸಿ ಈ ಭಾಗದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಮತ್ತು ಅಂತರ್ಜಲ ಮಟ್ಟವನ್ನು ವೃದ್ಧಿಸಲು ಯೋಜಿಸಿದ್ದು, ಶಿವಮೊಗ್ಗ ತಾಲ್ಲೂಕಿನ ಹೊಸಳ್ಳಿ ಗ್ರಾಮದ ಹತ್ತಿರ ಜಾಕ್‌ವೆಲ್ ಮತ್ತು ಪಂಪ್‌ಹೌಸನ್ನು ನಿರ್ಮಿಸಿ ತುಂಗಾ ನದಿಯಿಂದ 0.75 ಟಿಎಂಸಿ ನೀರನ್ನೆತ್ತಿ ಸದರಿ 75 ಕೆರೆಗಳನ್ನು ಹಾಗೂ ಅಂಜನಾಪುರ ಜಲಾಶಯಕ್ಕೆ ನೀರು ತುಂಬಿಸಲು ಪ್ರಸ್ತಾಪಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ದಿನಾಂಕ:28.12.2018 ರಂದು ನಡೆದ ಕರ್ನಾಟಕ ನೀರಾವರಿ ನಿಗಮದ 46ನೇ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯು ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಿರುತ್ತಾರೆ.

...2

ಮುಂದುವರೆದು, ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:01.02.2019 ರಂದು ನಡೆದ ಕರ್ನಾಟಕ ನೀರಾವರಿ ನಿಗಮದ ಮಂಡಳಿಯ 86ನೇ ಸಭೆಯಲ್ಲಿ ಮಂಡಿಸಿದ್ದು, ಪ್ರಸ್ತಾವನೆಗೆ ಮಂಡಳಿಯು ಅನುಮೋದನೆ ನೀಡಿ, ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ. ಆದ್ದರಿಂದ, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಕುಂಸಿ, ಮಲೇಶಂಕರ, ಸಿರಿಗೆರೆ, ತಮ್ಮಡಿಹಳ್ಳಿ ಸುತ್ತಮುತ್ತಲಿನ ಗ್ರಾಮಗಳ ಕೆರೆಗಳಿಗೆ ಮತ್ತು ಶಿಕಾರಿಪುರ ಮತ್ತು ಶಿರಾಳಕೊಪ್ಪ ತಾಲ್ಲೂಕಿನ ಪಟ್ಟಣಗಳ ಹಾಗೂ ಗ್ರಾಮಾಂತರ ಪ್ರದೇಶದ ಕುಡಿಯುವ ನೀರಿನ ಉದ್ದೇಶಕ್ಕಾಗಿ ತುಂಗಾ ನದಿಯಿಂದ ನೀರನ್ನೆತ್ತಿ ಕೆರೆಗಳಿಗೆ ತುಂಬಿಸುವ (ಹೊಸಳ್ಳಿ ಕೆರೆ ತುಂಬಿಸುವ ಯೋಜನೆ) ರೂ.305.00 ಕೋಟಿಗಳ ಪ್ರಸ್ತಾವನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ., ರವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿ, ಆರ್ಥಿಕ ಇಲಾಖೆಯು ಇದು 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾಗಿದ್ದು, ಆಯವ್ಯಯದಲ್ಲಿ ಸೂಚಿಸಿರುವಂತೆ ಅಂದಾಜು ಮೊತ್ತವನ್ನು ರೂ.250.00 ಕೋಟಿಗಳಿಗೆ ಮಿತಿಗೊಳಿಸುವ ಷರತ್ತಿಗೊಳಪಟ್ಟು ಪ್ರಸ್ತಾವನೆಗೆ ಸಹಮತಿ ನೀಡಿರುತ್ತದೆ.

ಈ ಹಿನ್ನೆಲೆಯಲ್ಲಿ

a) ನಿಗಮ ಮಂಡಳಿಯು ಅನುಮೋದಿಸಿರುವ ರೂ.305.00 ಕೋಟಿಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಯ ಪ್ರಸ್ತಾವನೆ

ಅಥವಾ

b) ಆರ್ಥಿಕ ಇಲಾಖೆಯು ಅಭಿಪ್ರಾಯ ಪಟ್ಟಿರುವಂತೆ ರೂ.250.00 ಕೋಟಿಗಳಿಗೆ ಮಿತಿಗೊಳಿಸುವ ಪ್ರಸ್ತಾವನೆಯನ್ನು ಸಚಿವ ಸಂಪುಟದ ಮುಂದೆ ಅನುಮೋದನೆಗಾಗಿ ಮಂಡಿಸಲಾಗಿರುತ್ತದೆ.

ಸಚಿವ ಸಂಪುಟವು ಆರ್ಥಿಕ ಇಲಾಖೆಯು ಸೂಚಿಸಿರುವಂತೆ ಪ್ರಸ್ತಾವನೆಯನ್ನು ಅನುಮೋದಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 03 ಎಂಎಂಬಿ 2019, ಬೆಂಗಳೂರು,**
**ದಿನಾಂಕ:01.08.2019.**

ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಕುಂಸಿ, ಮಲೇಶಂಕರ, ಸಿರಿಗೆರೆ, ತಮ್ಮಡಿಹಳ್ಳಿ ಸುತ್ತಮುತ್ತಲಿನ ಗ್ರಾಮಗಳ ಕೆರೆಗಳಿಗೆ ಮತ್ತು ಶಿಕಾರಿಪುರ ಮತ್ತು ಶಿರಾಳಕೊಪ್ಪ ತಾಲ್ಲೂಕಿನ ಪಟ್ಟಣಗಳ ಹಾಗೂ ಗ್ರಾಮಾಂತರ ಪ್ರದೇಶದ ಕುಡಿಯುವ ನೀರಿನ ಉದ್ದೇಶಕ್ಕಾಗಿ ತುಂಗಾ ನದಿಯಿಂದ ನೀರನ್ನೆತ್ತಿ ಕೆರೆಗಳಿಗೆ ತುಂಬಿಸುವ (ಹೊಸಳ್ಳಿ ಕೆರೆ ತುಂಬಿಸುವ ಯೋಜನೆ) 2018-19ನೇ ಸಾಲಿನ ದರ ಪಟ್ಟಿಯನ್ವಯ ತಯಾರಿಸಲಾದ ರೂ.305.00 ಕೋಟಿಗಳ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಸ್ತಾವನೆಗೆ, ಆರ್ಥಿಕ ಇಲಾಖೆಯ ಸೂಚನೆಯಂತೆ ಅಂದಾಜು ಮೊತ್ತವನ್ನು ರೂ.250.00 ಕೋಟಿಗಳಿಗೆ ಮಿತಿಗೊಳಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

...3

ಈ ಆದೇಶವನ್ನು ಆರ್ಥಿಕ ಇಲಾಖೆಯ ಕಂಡಿಕೆ–5648 ದಿನಾಂಕ:26.07.2019 ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ–1).
ಜಲ ಸಂಪನ್ಮೂಲ ಇಲಾಖೆ

<u>ಪ್ರತಿಯನ್ನು:</u>

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ). ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂ:ಸಿ:454/2019 ದಿನಾಂಕ:26.07.2019.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
6. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.